**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ॥ ವೈ.ಎ. ನಾರಾಯಣಸ್ವಾಮಿರವರು ಮಂಡಿಸಿರುವ ನಿಯಮ 72ರ ಸೂಚನೆಗೆ ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರ ಹೇಳಿಕೆ:**

* * *

ವಿಷಯ:- ರಾಜ್ಯದ ಪದವಿ ಪೂರ್ವ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅತಿಥಿ ಶಿಕ್ಷಕ/ಉಪನ್ಯಾಸಕರಿಗೆ ನೀಡುತ್ತಿರುವ ಸಂಭಾವನೆಯು ಕನಿಷ್ಠ ಮೊತ್ತಕ್ಕಿಂತ ಕಡಿಮೆ ಇದ್ದು ಸದರಿ ಶಿಕ್ಷಕರಿಗೆ ರೂ.20 ಸಾವಿರ ಹಾಗೂ ಉಪನ್ಯಾಸಕರಿಗೆ ರೂ.25 ಸಾವಿರ ಗಳಂತೆ ಹೆಚ್ಚಿಸುವ ಬಗ್ಗೆ ಮಾನ್ಯ ಶಾಲಾ ಶಿಕ್ಷಣ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಉತ್ತರ:**

ಸರ್ಕಾರದ ಆದೇಶ ಸಂಖ್ಯೆ:ಇಪಿ 50 ಡಿಜಿಡಿ 2022 ದಿನಾಂಕ:05-07-2022ರಲ್ಲಿ 2022-23ನೇ ಸಾಲಿನಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆದುರಾಗಿ ಒಟ್ಟು 3708 ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲು ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ನೀಡಲಾಗುತ್ತಿದ್ದ ಮಾಸಿಕ ಗೌರವಧನ ರೂ.9000/-ಗಳನ್ನು ಪರಿಷ್ಕರಿಸಿ ರೂ.12000/-ಗಳಿಗೆ ಹೆಚ್ಚಿಸಿ ಆದೇಶಿಸಲಾಗಿದೆ. ಸರ್ಕಾರದ ಆದೇಶ ಸಂಖ್ಯೆ:ಇಪಿ 14 ಎಸ್ಇಎಸ್ 2022 ದಿನಾಂಕ:18-06-2022ರಲ್ಲಿ ಸರ್ಕಾರಿ ಪ್ರಾಥಮಿಕ ಶಾಲಾ ಅತಿಥಿ ಶಿಕ್ಷಕರಿಗೆ ನೀಡಲಾಗುತ್ತಿದ್ದ ಗೌರವ ಸಂಭಾವನೆಯನ್ನು ರೂ.7,500/-ಗಳನ್ನು ಪರಿಷ್ಕರಿಸಿ ರೂ.10,000/-ಗಳಿಗೆ ಹಾಗೂ ಸರ್ಕಾರಿ ಪ್ರೌಢ ಶಾಲಾ ಅತಿಥಿ ಶಿಕ್ಷಕರಿಗೆ ನೀಡಲಾಗುತ್ತಿದ್ದ ಗೌರವ ಸಂಭಾವನೆಯನ್ನು ರೂ.8,000/-ಗಳನ್ನು ಪರಿಷ್ಕರಿಸಿ ರೂ.10,500/-ಗಳಿಗೆ ಹೆಚ್ಚಿಸಿ ಆದೇಶಿಸಲಾಗಿದೆ.

ಅದರಂತೆ ರಾಜ್ಯದ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ರೂ.12000/- ಗೌರವಧನವನ್ನು, ಸರ್ಕಾರಿ ಪ್ರಾಥಮಿಕ ಶಾಲಾ ಅತಿಥಿ ಶಿಕ್ಷಕರಿಗೆ ರೂ.10,000/-ಗಳನ್ನು ಹಾಗೂ ಸರ್ಕಾರಿ ಪ್ರೌಢ ಶಾಲಾ ಅತಿಥಿ ಶಿಕ್ಷಕರಿಗೆ ರೂ.10,500/-ಗಳ ಗೌರವ ಸಂಭಾವನೆಯನ್ನು ಪಾವತಿಸಲಾಗುತ್ತಿರುವುದರಿಂದ ಅತಿಥಿ ಶಿಕ್ಷಕರಿಗೆ ರೂ.20,000/-ಗಳನ್ನು ಹಾಗೂ ಅತಿಥಿ ಉಪನ್ಯಾಸಕರುಗಳಿಗೆ ರೂ.25,000/- ಗೌರವಧನವನ್ನು ಹೆಚ್ಚಿಸುವ ಯಾವುದೇ ಪ್ರಸ್ತಾವನೆ ಪರಿಗಣನೆಯಲ್ಲಿರುವುದಿಲ್ಲ.

(ಎಸ್. ಮಧು ಬಂಗಾರಪ್ಪ)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.

ಸಂಖ್ಯೆ:ಇಪಿ 121 ಡಿಜಿಡಬ್ಲ್ಯೂ 2023